# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1090
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
ಉತ್ತರಿಸುವ ದಿನಾಂಕ : 23-02-2024.
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಕುರಿತು ಸಮಾಜ ಕಲ್ಯಾಣ ಇಲಾಖೆಯಲ್ಲಿ ಆದೇಶವಾಗಿದೆಯೇ; | ಎಲ್ಲಾ ಇಲಾಖೆಗಳು ಮತ್ತು ಅವುಗಳ ಅಧೀನದಲ್ಲಿರುವ ನಿಗಮ ಮತ್ತು ಮಂಡಳಿಗಳು/ಅನುದಾನಿತ ಶಾಲೆ/ ಕಾಲೇಜುಗಳು / ಶೈಕ್ಷಣಿಕ ಸಂಸ್ಥೆಗಳು ಸೇರಿದಂತೆ ಗುರುತಿಸಲಾಗಿ, ಬಾಕಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಗಳಿಂದ ಆದೇಶಗಳನ್ನು ಹೊರಡಿಸಲಾಗಿದೆ. (ಪ್ರತಿಗಳನ್ನು ಲಗತ್ತಿಸಿದೆ)<br><br>ಅಲ್ಲದೇ, ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿರುವ ಸಚಿವ ಸಂಪುಟದ ಉಪಸಮಿತಿಯು ಕಾಲಕಾಲಕ್ಕೆ ಸಭೆ ನಡೆಸಿ, ಮುಖ್ಯವಾಗಿ ಅನುದಾನಿತ ಶಾಲೆ/ಕಾಲೇಜುಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ /ಉನ್ನತ ಶಿಕ್ಷಣ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿದೆ. |
| ಆ) | ಹಾಗಿದ್ದಲ್ಲಿ, ಸದರಿ ಆದೇಶದ ಪ್ರತಿಯನ್ನು ಒದಗಿಸುವುದೇ; | |
| ಇ) | ಯಾವ ಸಾಲಿನವರೆಗೆ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ? (ವಿವರ ನೀಡುವುದು) | ಬ್ಯಾಕ್‌ಲಾಗ್ ಹುದ್ದೆಗಳನ್ನು 2001ನೇ ಸಾಲಿನಲ್ಲಿ ಮತ್ತು ತದನಂತರ ಗುರುತಿಸಲಾಗಿದೆ. ಅಂತಹ ಹುದ್ದೆಗಳನ್ನು ವಿಳಂಬ ಮಾಡದೆ ಭರ್ತಿ ಮಾಡುವಂತೆ ಸಚಿವ ಸಂಪುಟದ ಉಪಸಮಿತಿಯಿಂದ ನಿರ್ದೇಶಿಸಲಾಗಿದೆ. ಆದಾಗ್ಯೂ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಗುರುತಿಸಲಾದ ಬ್ಯಾಕ್‌ಲಾಗ್ ಹುದ್ದೆಗಳನ್ನು ಈಗಲೂ ಭರ್ತಿ ಮಾಡದೇ ಬಾಕಿ ಇರುತ್ತವೆ. |

**No: SWD/95/SLP/2024**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.

ಅನುಬಂಧ

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 658 ಸೇನೆನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:27.12.2018

**ಸುತ್ತೋಲೆ**

ವಿಷಯ: ಬ್ಯಾಕ್‌ಲಾಗ್ ಹುದ್ದೆಗಳನ್ನು ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 42 ಎಸ್‌ಆರ್‌ಆರ್ 82, ದಿನಾಂಕ: 25.01.1984.
2. ಸುತ್ತೋಲೆ ಸಂಖ್ಯೆ: ಸಿಆಸುಇ 34 ಸೆನೆನಿ 2010, ದಿನಾಂಕ:28.5.2010.
3. ಸುತ್ತೋಲೆ ಸಂಖ್ಯೆ: ಸಿಆಸುಇ 230 ಸೆನೆನಿ 2015, ದಿನಾಂಕ:14.8.2015.
4. ಸುತ್ತೋಲೆ ಸಂಖ್ಯೆ: ಸಿಆಸುಇ 626 ಸೆನೆನಿ 2018, ದಿನಾಂಕ:17.9.2018.
5. ಮಾನ್ಯ ಸಮಾಜ ಕಲ್ಯಾಣ ಸಚಿವರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ದಿನಾಂಕ: 19.11.2018ರ ಪತ್ರ.

*~*~*~*~*~*

1. ರಾಜ್ಯ ಸಿವಿಲ್ ಸೇವೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಉಸ್ತುವಾರಿಗಾಗಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಈ ಸಚಿವ ಸಂಪುಟ ಉಪಸಮಿತಿಯು ಆಗಿಂದಾಗ್ಗೆ ಸಭೆ ಸೇರಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿರುವ ಬಗ್ಗೆ ವಿವರಗಳನ್ನು ಪರಿಶೀಲಿಸಿ ಸೂಕ್ತ ನಿರ್ದೇಶನಗಳನ್ನು ನೀಡುತ್ತಿದೆ. ದಿನಾಂಕ: 17.10.2018ರಂದು ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ಹಲವಾರು ಇಲಾಖಾ ಮುಖ್ಯಸ್ಥರು ನಿರ್ಲಕ್ಷ್ಯತೆಯನ್ನು ತೋರುತ್ತಿರುವುದು ಕಂಡುಬಂದಿರುವುದರಿಂದ ಬಾಕಿ ಉಳಿದಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಲವು ನಿರ್ಣಯಗಳನ್ನು ಕೈಗೊಂಡಿದೆ.

2. ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) 1990ರ ಅಧಿನಿಯಮದ ಕಲಂ 5ರ ಪ್ರಕಾರ ಸದರಿ ಅಧಿನಿಯಮ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳನ್ನು ಉಲ್ಲಂಘಿಸಿ, ಯಾವೊಬ್ಬ ನೇಮಕಾತಿ ಪ್ರಾಧಿಕಾರಿಯು ನೇಮಕ ಮಾಡಿದರೆ ಅಥವಾ ವಿಶ್ವವಿದ್ಯಾನಿಲಯದಲ್ಲಿ ಅಥವಾ ಶಿಕ್ಷಣ ಸಂಸ್ಥೆಯಲ್ಲಿ ಯಾವುದೇ ವ್ಯಾಸಂಗ ಕ್ರಮಕ್ಕೆ ಪ್ರವೇಶಾವಕಾಶ ನೀಡುವ ಯಾವೊಬ್ಬ ಪ್ರಾಧಿಕಾರಿಯು ಅಂಥ ಪ್ರವೇಶಾವಕಾಶ ನೀಡಿದರೆ, ಅಂತಹವರನ್ನು ಒಂದು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆ ಮತ್ತು 6 ತಿಂಗಳವರೆಗೆ ವಿಸ್ತರಿಸಬಹುದಾದ ಅವಧಿಯ

..2..

27/12/18

ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿರುತ್ತದೆ. ಮುಂದುವರೆದು, ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ನಿಯಮಗಳು 1992ರ ನಿಯಮ 10(4)ರನ್ವಯ ನೇಮಕಾತಿ ಪ್ರಾಧಿಕಾರವನ್ನು ಕಾನೂನು ಕ್ರಮಕ್ಕೂ ಸಹ ಗುರಿಪಡಿಸಲು ಅವಕಾಶವಿರುತ್ತದೆ.

3. ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡುವಾಗ ಜಾರಿಯಲ್ಲಿರುವ ನೇರ ನೇಮಕಾತಿ ಮೀಸಲಾತಿಯನ್ನು ಅನುಸರಿಸಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಒದಗಿಸಿರುವ ಮೀಸಲಾತಿಯನ್ನು ಅನುಷ್ಠಾನಗೊಳಿಸಿರುವ ಬಗ್ಗೆ ನಮೂನೆ-1 ಮತ್ತು 2ರಲ್ಲಿ ನಿಗದಿಪಡಿಸಿರುವಂತೆ ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವಂತೆ ಉಲ್ಲೇಖಿತ (1)ರಿಂದ (4)ರವರೆಗಿನ ಅಧಿಕೃತ ಜ್ಞಾಪನ/ಸುತ್ತೋಲೆಗಳಲ್ಲಿ ಈಗಾಗಲೇ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡಲಾಗಿದೆ.

4. ಆದುದರಿಂದ, ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚಿಸಲಾಗಿದೆ :-

(1) **ಬ್ಯಾಕ್‌ಲಾಗ್ ಹುದ್ದೆಗಳನ್ನು ಆಧ್ಯತೆಯ ಮೇರೆಗೆ ಒಂದು ತಿಂಗಳೊಳಗಾಗಿ ಭರ್ತಿ ಮಾಡಲು ಕ್ರಮವಹಿಸುವುದು;**

(2) **ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದೆ ಮೀಸಲಾತಿ ನಿಯಮಗಳನ್ನು ಉಲ್ಲಂಘಿಸಿರುವ ಅನುದಾನಿತ ಶಿಕ್ಷಣ ಸಂಸ್ಥೆಗಳು, ಸಹಕಾರ ಸಂಸ್ಥೆಗಳಿಗೆ ನೀಡುವ ಅನುದಾನವನ್ನು ತಡೆಹಿಡಿಯಲು ಉನ್ನತ ಶಿಕ್ಷಣ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಹಾಗೂ ಸಹಕಾರ ಇಲಾಖೆಗಳು ನಿಯಮಾನುಸಾರ ಕ್ರಮ ಕೈಗೊಳ್ಳುವುದು;**

(3) **ಬ್ಯಾಕ್‌ಲಾಗ್ ಹುದ್ದೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ದೃಢೀಕರಿಸಿ, ಲಿಖಿತವಾಗಿ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು;**

(4) **ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಅಧಿಸೂಚನೆಯನ್ನು ರಾಜ್ಯ ಮಟ್ಟದಲ್ಲಿ ಹೆಚ್ಚು ಪ್ರಸಾರ ಹೊಂದಿರುವ ಕನಿಷ್ಠ ಎರಡು ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡುವುದು;**

(5) **ರೋಸ್ಟರ್ ವಹಿ ಮತ್ತು ವೇಕೆನ್ಸಿ ವಹಿಯನ್ನು ಸಲ್ಲಿಸದೇ ಇರುವ ಇಲಾಖೆಗಳು ಕೂಡಲೇ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು;**

29/12/18

..3..

5. ಮೇಲ್ಕಂಡ ಸೂಚನೆಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಸಚಿವ ಸಂಪುಟ ಉಪ ಸಮಿತಿಯು ಆಗಿಂದಾಗ್ಗೆ ಉಸ್ತುವಾರಿ ಮಾಡುವುದರಿಂದ ಮೇಲ್ಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಮತ್ತೊಮ್ಮೆ ಸೂಚಿಸಲಾಗಿದೆ.

27/12/18

(ಎಸ್.ಆರ್. ಬಸವರಾಜಯ್ಯ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು-ಎ) ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

ಪ್ರತಿ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
3. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ: ವಿಧಾನ ಪರಿಷತ್ತು, ವಿಧಾನ ಸಭೆ, ಬೆಂಗಳೂರು
4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
5. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು.
8. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
9. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 658 ಸೇಸೇನಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:24.01.2019

## ಸುತ್ತೋಲೆ

ವಿಷಯ: ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ರಿಕ್ತ ಸ್ಥಾನಗಳ ರಿಜಿಸ್ಟರನ್ನು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 42 ಎಸ್‌ಆರ್‌ಆರ್ 82, ದಿನಾಂಕ: 25.01.1984.
2. ಸುತ್ತೋಲೆ ಸಂಖ್ಯೆ: ಸಿಆಸುಇ 34 ಸೇಸೇನಿ 2010, ದಿನಾಂಕ:28.5.2010.
3. ಸುತ್ತೋಲೆ ಸಂಖ್ಯೆ: ಸಿಆಸುಇ 230 ಸೇಸೇನಿ 2015, ದಿನಾಂಕ:14.8.2015.
4. ಸುತ್ತೋಲೆ ಸಂಖ್ಯೆ: ಸಿಆಸುಇ 626 ಸೇಸೇನಿ 2018, ದಿನಾಂಕ:17.9.2018.
5. ಸುತ್ತೋಲೆ ಸಂಖ್ಯೆ: ಸಿಆಸುಇ 658 ಸೇಸೇನಿ 2018, ದಿನಾಂಕ:27.12.2018.
6. ಮಾನ್ಯ ಸಮಾಜ ಕಲ್ಯಾಣ ಸಚಿವರು ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ದಿನಾಂಕ: 9.01.2019ರ ಪತ್ರ.

*~*~*~*~*~*

1. ರಾಜ್ಯ ಸಿವಿಲ್ ಸೇವೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ಗಳನ್ನು ನಿರ್ವಹಿಸಿ ಅವುಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಗಳಿಂದ ವಿವಿಧ ಸುತ್ತೋಲೆಗಳ ಮುಖಾಂತರ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಹೀಗಿದ್ದಾಗ್ಯೂ ಸಹ ಸರ್ಕಾರದ ನಿರ್ದೇಶನಗಳನ್ನು ಪಾಲಿಸದೇ ಬ್ಯಾಕ್‌ಲಾಗ್ ಹುದ್ದೆಗಳನ್ನು ಆದ್ಯತೆಯ ಮೇಲೆ / ಕಾಲಮಿತಿಯೊಳಗೆ ಭರ್ತಿಮಾಡದೆ ಇರುವುದನ್ನು ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸದೇ ಇರುವುದನ್ನು ತೀವ್ರವಾಗಿ ಗಮನಿಸಿದ ನಂತರ ಸರ್ಕಾರವು, ಇದನ್ನು ಪಾಲಿಸದೇ ಇದ್ದಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಹಾಗೂ ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) 1990ರ ಅಧಿನಿಯಮದ ಕಲಂ 5ರ ಪ್ರಕಾರ ಹಾಗೂ ಅದರಡಿ ರಚಿಸಲಾಗಿರುವ ನಿಯಮಗಳ ನಿಯಮ 10(4)ರನ್ವಯ ನೇಮಕಾತಿ ಪ್ರಾಧಿಕಾರಕ್ಕೆ ಜುಲ್ಮಾನೆ/ ಶಿಕ್ಷೆಯನ್ನು ಹಾಗೂ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆಯೂ ಅವಕಾಶವಿರುವುದನ್ನು ಉಲ್ಲೇಖಿಸಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಒಂದು ತಿಂಗಳೊಳಗಾಗಿ ಭರ್ತಿಮಾಡುವಂತೆ ಹಾಗೂ ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವಂತೆ ಉಲ್ಲೇಖ (5)ರ ದಿನಾಂಕ: 27.12.2018ರ ಸುತ್ತೋಲೆಯಲ್ಲಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿತ್ತು.

2. ಆದರೆ, ಬಹುತೇಕ ಇಲಾಖೆಗಳು ಇದುವರೆವಿಗೂ ರೋಸ್ಟರ್ ರಿಜಿಸ್ಟರ್ ಮತ್ತು ವೇಕೆನ್ಸಿ ರಿಜಿಸ್ಟರ್‌ಗಳನ್ನು ಸಲ್ಲಿಸದೇ ಇರುವುದು ಹಾಗೂ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಯಾವುದೇ ಕ್ರಮ ಕೈಗೊಳ್ಳದೇ ಇರುವುದನ್ನು ದಿನಾಂಕ: 03.01.2019ರಂದು ನಡೆದ ಸಚಿವ ಸಂಪುಟ ಉಪ ಸಮಿತಿಯು ಗಂಭೀರವಾಗಿ ಪರಿಗಣಿಸಿರುವುದರಿಂದ, ದಿನಾಂಕ: 25.01.2019ರೊಳಗಾಗಿ ರೋಸ್ಟರ್ ಹಾಗೂ ವೇಕೆನ್ಸಿ ರಿಜಿಸ್ಟರ್‌ಗಳನ್ನು ಆಯುಕ್ತರು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸದೇ ಇದ್ದಲ್ಲಿ ಹಾಗೂ ದಿನಾಂಕ: 30.01.2019ರೊಳಗಾಗಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿ ವರದಿ ಸಲ್ಲಿಸದೇ ಇದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಮೇಲೆ ಹೇಳಲಾದ ಅಧಿನಿಯಮ/ ನಿಯಮಾವಳಿಗಳಂತೆ ಕಠಿಣ ಕಾನೂನು ಕ್ರಮ ಜರುಗಿಸುವುದು ಅನಿವಾರ್ಯವಾಗಿರುತ್ತದೆಂದು ಮಾನ್ಯ ಸಮಾಜ ಕಲ್ಯಾಣ ಸಚಿವರು ಉಲ್ಲೇಖಿತ ದಿನಾಂಕ: 09.01.2019ರ ಅರೆ ಸರ್ಕಾರಿ ಪತ್ರದಲ್ಲಿ ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

3. ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಂತೆ, ಸರ್ಕಾರದಿಂದ ಹಲವಾರು ನಿರ್ದೇಶನಗಳನ್ನು ನೀಡಲಾಗಿದೆ. ಸಚಿವ ಸಂಪುಟ ಉಪ ಸಮಿತಿಯೂ ಸಹ ಆಗಿಂದಾಗ್ಗೆ ಈ ಬಗ್ಗೆ ಪರಾಮರ್ಶೆ ನಡೆಸಿ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಗಳನ್ನು ನೀಡುತ್ತಿದೆ. ಹೀಗಿದ್ದಾಗ್ಯೂ ಸಹ ನೇಮಕಾತಿ ಪ್ರಾಧಿಕಾರಗಳು ಯಾವುದೇ ಕ್ರಮ ಜರುಗಿಸದೇ ಹಾಗೂ ಸರ್ಕಾರದ ನಿರ್ದೇಶನಗಳನ್ನು ಪಾಲಿಸದೇ ಕರ್ತವ್ಯ ನಿರ್ಲಕ್ಷ್ಯ ವಹಿಸಿರುವುದು ತುಂಬಾ ವಿಷಾದನೀಯ, ಇಂತಹ ಕರ್ತವ್ಯ ಲೋಪವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ***ಆದುದರಿಂದ, ದಿನಾಂಕ: 25.01.2019ರೊಳಗಾಗಿ ರೋಸ್ಟರ್ ಹಾಗೂ ವೇಕೆನ್ಸಿ ರಿಜಿಸ್ಟರ್‌ಗಳನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವಂತೆ ಮತ್ತು ದಿನಾಂಕ: 30.01.2019ರೊಳಗಾಗಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಿ ವರದಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ತಪ್ಪದೇ ಕಳುಹಿಸುವಂತೆ ಸೂಚಿಸಲಾಗಿದೆ.*** ತಪ್ಪಿದಲ್ಲಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಮುಂದಿನ ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ/ ಆಯೋಗ/ ನಿಗಮ ಮಂಡಳಿಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೂ ಈ ಕುರಿತು ಕೂಡಲೇ ಸೂಚನೆ ನೀಡುವಂತೆ ತಿಳಿಸಲಾಗಿದೆ

(ಅಂಜುಂ ಪರ್ವೇಜ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಿಆಸುಇ (ಸೇವಾ ನಿಯಮಗಳು–ಎ) ನಂ. 31, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಬೇಕೆಂದು ಕೋರಿದೆ.

--3

ಪ್ರತಿ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
3. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ: ವಿಧಾನ ಪರಿಷತ್ತು, ವಿಧಾನ ಸಭೆ, ಬೆಂಗಳೂರು
4. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
5. *ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6. *ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
7. *ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು.
8. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ.
9. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(*ಮುಖಪತ್ರದೊಂದಿಗೆ)

**ಕರ್ನಾಟಕ ಸರ್ಕಾರ**

ಸಂಖ್ಯೆ:SWD/500/SLP/2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:13.11.2023.

**ಸುತ್ತೋಲೆ**

ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಡಾ: ಎಂ. ಮಂಜು ಪ್ರಸಾದ್ ಇವರು ಸರ್ಕಾರಿ ದಂತ ಕಾಲೇಜು ಮತ್ತು ಸಂಶೋದನಾ ಸಂಸ್ಥೆ ಇಲ್ಲಿ ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 797/2023 ರ ಪ್ರಕರಣದಲ್ಲಿ ದಿನಾಂಕ:21-09-2023 ರಂದು ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿನ ಬ್ಯಾಕ್‌ಲಾಗ್ ಹುದ್ದೆಗಳನ್ನು ಆರು ತಿಂಗಳ ಒಳಗಾಗಿ ಭರ್ತಿ ಮಾಡುವಂತೆ ಮಾನ್ಯ ಉಚ್ಚ ನ್ಯಾಯಾಲಯವು ತೀರ್ಪು ನೀಡಿದೆ. ( ಪ್ರತಿ ಲಗತ್ತಿಸಿದೆ).

ಆದ್ದರಿಂದ ರಿಟ್ ಅಪೀಲು ಸಂಖ್ಯೆ:797/2023 ಪ್ರಕರಣದಲ್ಲಿ ದಿನಾಂಕ:21-09-2023 ರಂದು ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನ ಅನುಸಾರ ಎಲ್ಲಾ ಇಲಾಖಾ ಮುಖ್ಯಸ್ಥರು, ತಮ್ಮ ಇಲಾಖೆಯಲ್ಲಿನ ಮತ್ತು ಇಲಾಖಾ ವ್ಯಾಪ್ತಿಯಡಿ ಬರುವ ಸಂಸ್ಥೆಗಳಲ್ಲಿನ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಆದೇಶಗಳು, ಸುತ್ತೋಲೆಗಳು ಮತ್ತು ಅಧಿಸೂಚನೆಗಳನ್ವಯ ಆರು (06) ತಿಂಗಳೊಳಗಾಗಿ ಕಡ್ಡಾಯವಾಗಿ ಭರ್ತಿ ಮಾಡುವಂತೆ ತಿಳಿಸಲಾಗಿದೆ.

(ಮೇಜರ್ ಪಿ.ಮಣಿವಣ್ಣನ್ ಭಾ.ಆ.ಸೇ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌದ, ಬೆಂಗಳೂರು.

6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಭಾರೀ ನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
21. ಸರ್ಕಾರದ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
22. ಸರ್ಕಾರದ ಕಾರ್ಯದರ್ಶಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ವಿಕಾಸಸೌಧ, ಬೆಂಗಳೂರು
23. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
24. ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
25. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
26. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
27. ಸರ್ಕಾರದ ಕಾರ್ಯದರ್ಶಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿಕಾಸಸೌಧ, ಬೆಂಗಳೂರು.

28. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನಸೌಧ, ಬೆಂಗಳೂರು.
29. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
30. ಸರ್ಕಾರದ ಕಾರ್ಯದರ್ಶಿ, ಸಣ್ಣ ಕೈಗಾರಿಕೆ ಮತ್ತು ಕೈಮಗ್ಗ ಮತ್ತು ಜವಳಿ ಇಲಾಖೆ, ವಿಕಾಸಸೌಧ, ಬೆಂಗಳೂರು.
31. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
32. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು.
33. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
34. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
35. ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು.
37. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು.
38. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು

**ಪ್ರತಿ ಮಾಹಿತಿಗಾಗಿ**:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸಲಹೆಗಾರರು ನೋಡಲ್ ಏಜೆನ್ಸಿ, ಎಸ್. ಸಿ.ಎಸ್.ಪಿ/ಟಿ.ಎಸ್.ಪಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಇವರ ಆಪ್ತ ಸಹಾಯಕರು, ವಿಧಾನಸೌಧ, ಬೆಂಗಳೂರು.